ಅಧ್ಯಕ್ಷರು :— ಆಯಿತು, ಈಗ ಈ ವಿಷಯವನ್ನು ಇಲ್ಲಿಗೆ ಮುಕ್ತಾಯ ಮಾಡೋಣ.

ಶ್ರೀ ಹೆಚ್. ಶಿವಪ್ಪ :— ಇದನ್ನು ಅರ್ಧ ಗಂಟೆಯ ಚರ್ಚೆಗೆ ತೆಗೆದುಕೊಂಡರೆ ವಿವರಣೆ ನೀಡುತ್ತೇನೆ, ಇಲ್ಲ ಬಜೆಟ್‌ನಲ್ಲಿ ಬೇಕಾದರೂ ಹೇಳುತ್ತೇನೆ.

ಅಧ್ಯಕ್ಷರು :— ಆಯಿತು, ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

(ಅ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ವಾರ್ತಾ ಹಾಗೂ ಪ್ರವಾಸೋದ್ಯಮ) :— ಮಾನ್ಯ ಅಧ್ಯಕ್ಷರೆ, 12ನೇ ಪಟ್ಟಿಯಲ್ಲಿರುವ 59 ಪ್ರಶ್ನೆಗಳ ಪೈಕಿ 38 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಹುಬ್ಬಳ್ಳಿ ನಗರ ಪ್ರದೇಶದಲ್ಲಿ ಹದಗೆಟ್ಟಿರುವ ಒಳಚರಂಡಿ ವ್ಯವಸ್ಥೆ.

815(1270) ಶ್ರೀ ಅಶೋಕ್ ಶಂಕರ್ ಕಾಟ್ವೆ (ಹುಬ್ಬಳ್ಳಿ) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ನಗರ ಪ್ರದೇಶದಲ್ಲಿನ ಒಳಚರಂಡಿ ವ್ಯವಸ್ಥೆ ತುಂಬಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ವಿಷಯದ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಮೀರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು) :—

ಅ) ಇಲ್ಲಾ

ಆ) ಒಳಚರಂಡಿ ವ್ಯವಸ್ಥೆಯು ಸಮರ್ಪಕವಾಗಿರುತ್ತದೆ. ಅವಶ್ಯಕ ದುರಸ್ತಿ ಕಾರ್ಯವನ್ನು ಆದ್ಯತೆ ಮೇರೆಗೆ ಕೈಗೊಳ್ಳಲಾಗುತ್ತಿದೆ.

ಹುಬ್ಬಳ್ಳಿ ಪಟ್ಟಣದಲ್ಲಿ ಕೊಳವೆ ಬಾವಿಗಳ ನಿರ್ವಹಣೆ.

816 (1285) ಶ್ರೀ ಅಶೋಕ್ ಶಂಕರ್ ಕಾಟ್ವೆ (ಹುಬ್ಬಳ್ಳಿ) :— ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಪಟ್ಟಣದಲ್ಲಿ ಇರುವ ಕೊಳವೆ ಬಾವಿಗಳ ಒಟ್ಟು ಸಂಖ್ಯೆ ಎಷ್ಟು? ಆ ಪೈಕಿ ಕಾರ್ಯನಿರ್ವಹಿಸುತ್ತಿರುವುಗಳ ಸಂಖ್ಯೆ ಎಷ್ಟು?

ಆ) ಕಾರ್ಯ ನಿರ್ವಹಿಸದೇ ಇರುವ ಕೊಳವೆ ಬಾವಿಗಳನ್ನು ದುರಸ್ತಿಗೊಳಿಸಲು ಕೈಕೊಂಡ ಕ್ರಮಗಳೇನು?

ಶ್ರೀ ಮೀರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು) :—

ಅ) 635

595

ಆ) ಸುಸ್ಥಿತಿಯಲ್ಲಿರದ ಕೊಳವೆ ಬಾವಿಗಳನ್ನು ಕಾಲ ಕಾಲಕ್ಕೆ ತುರ್ತಾಗಿ ದುರಸ್ತಿ ಮಾಡಿಸಲಾಗುತ್ತಿದೆ. ಇವುಗಳ ಜೊತೆಗೆ ಆ ಬೋರ್‌ವೆಲ್‌ಗಳನ್ನು ವಿವಿಧ ಭಾಗಗಳಲ್ಲಿ ತೆಗೆಸಲಾಗಿದೆ. ಅವುಗಳ ಪೈಕಿ ಹೆಚ್ಚು ನೀರು ಬರುವ ಬಾವಿಗಳಿಗೆ ಸಬ್‌ಮರ್ಸಿಬಲ್ ಪಂಪ್‌ಗಳನ್ನು ಅಳವಡಿಸಲಾಗಿದೆ.

ವಿದ್ಯಾರ್ಥಿ ವಸತಿಗೃಹಗಳಲ್ಲಿ ಸಿಬ್ಬಂದಿ ಕೊರತೆ.

817(1263) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿದ್ಯಾರ್ಥಿಗಳ ವಸತಿ ಗೃಹಗಳಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ನಿಜವೇ?

ಆ) ಹಾಗಿದ್ದಲ್ಲಿ ಜಿಲ್ಲಾವಾರು ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

ಇ) ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ?

ಶ್ರೀ ಕೆ.ಎಂ. ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು) :—

ಅ) ಹೌದು

ಆ) ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿದ್ಯಾರ್ಥಿಗಳ ವಸತಿ ಗೃಹಗಳಲ್ಲಿ 396 ಮೇಲ್ವಿಚಾರಕರ ಹುದ್ದೆಗಳು ಹಾಗೂ ವಿದ್ಯಾರ್ಥಿನಿ ವಸತಿಗೃಹಗಳಲ್ಲಿ 80 ಮೇಲ್ವಿಚಾರಕರ ಹುದ್ದೆಗಳು ಒಟ್ಟು 476 ಮೇಲ್ವಿಚಾರಕರ ಹುದ್ದೆಗಳು ಮತ್ತು 954 'ಡಿ' ದರ್ಜೆ ನೌಕರರ ಹುದ್ದೆಗಳು ಖಾಲಿ ಇವೆ. ಜಿಲ್ಲಾವಾರು ವಿವರಗಳನ್ನು ಅನುಬಂಧ - 1 ರಲ್ಲಿ ನೀಡಲಾಗಿದೆ.

ಇ) ವಸತಿ ಗೃಹಗಳಲ್ಲಿ ವಿದ್ಯಾರ್ಥಿ ನಿಲಯದ ಮೇಲ್ವಿಚಾರಕರುಗಳ ಹಾಗೂ ಗ್ರೂಪ್ 'ಡಿ' ಖಾಲಿ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ.